# All India Radio: Bangalore
# National Bulletin In Kannada
# 24.01.2026  19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ೭೭ನೇ ಗಣರಾಜ್ಯೋತ್ಸವದ ಮುನ್ನಾದಿನವಾದ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ರಾಷ್ಟ್ರವನ್ನುದ್ದೇಶಿಸಿ ಭಾಷಣ
- ಯುವ ಜನತೆಗೆ ಹೊಸ ಉದ್ಯೋಗಾವಕಾಶ ಸೃಷ್ಟಿಸಲು ಸರ್ಕಾರದ ಪ್ರಯತ್ನ- ಪ್ರಧಾನಿ ನರೇಂದ್ರ ಮೋದಿ
- ಮನ್ ಕಿ ಬಾತ್‌ನ ೧೩೦ನೇ ಆವೃತ್ತಿಯಲ್ಲಿ ನಾಳೆ ಪ್ರಧಾನಿ ಮನದಾಳದ ಮಾತು
- ಡಬ್ಲ್ಯುಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್, ಫೀಲ್ಡಿಂಗ್ ಆಯ್ಕೆ

<>><><*><><<>

೭೭ನೇ ಗಣರಾಜ್ಯೋತ್ಸವದ ಮುನ್ನಾದಿನವಾದ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರವನ್ನುದ್ದೇಶಿಸಿ ಮಾತನಾಡಲಿದ್ದಾರೆ.  ಈ ಭಾಷಣವು, ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳಲ್ಲಿ ಸಂಜೆ ೭ ಗಂಟೆಯಿಂದ ಪ್ರಸಾರವಾಗಲಿದೆ. ನಂತರ ದೂರದರ್ಶನ ಮತ್ತು ಆಕಾಶವಾಣಿಯ ಪ್ರಾದೇಶಿಕ ಕೇಂದ್ರಗಳಲ್ಲಿ ರಾತ್ರಿ ೯.೩೦ ರಿಂದ ಆಯ ಪ್ರಾದೇಶಿಕ ಭಾಷಾ ಆವೃತ್ತಿಗಳಲ್ಲಿ ಪ್ರಸಾರವಾಗಲಿವೆ.

<>><><*><><<>

ಭಾರತ ಮತ್ತು ವಿದೇಶಗಳಲ್ಲಿ ಯುವಕರಿಗೆ ಹೊಸ ಉದ್ಯೋಗದ ಅವಕಾಶಗಳನ್ನು ಸೃಷ್ಟಿಸಲು ಸರ್ಕಾರ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.  ಇಂದು ನವದೆಹಲಿಯಿಂದ ವರ್ಚುವಲ್ ಮೂಲಕ ೧೮ನೇ ರಾಷ್ಟ್ರೀಯ ರೋಜ್‌ಗಾರ್ ಮೇಳವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಭಾರತವು ಹಲವಾರು ದೇಶಗಳೊಂದಿಗೆ ವ್ಯಾಪಾರ, ಚಲನಶೀಲತೆ ಒಪ್ಪಂದಗಳಿಗೆ ಸಹಿ ಹಾಕುತ್ತಿದೆ, ಇದು ದೇಶದ ಕೌಶಲ್ಯಪೂರ್ಣ ಯುವಕರಿಗೆ ಉದ್ಯೋಗದ ಅವಕಾಶಗಳನ್ನು ಒದಗಿಸಲಿದೆ ಎಂದು ಹೇಳಿದ್ದಾರೆ.  ರೋಜ್‌ಗಾರ್ ಮೇಳವು ಒಂದು ಸಂಸ್ಥೆಯಾಗಿ ಮಾರ್ಪಟ್ಟಿದೆ ಮತ್ತು ಲಕ್ಷಾಂತರ ಯುವಕರು ಈಗಾಗಲೇ ವಿವಿಧ ಸರ್ಕಾರಿ ಇಲಾಖೆಗಳಿಂದ ನೇಮಕಾತಿ ಪತ್ರಗಳನ್ನು ಪಡೆದಿದ್ದಾರೆ ಎಂದು ಹೇಳಿದರು.  ಈ ಕಾರ್ಯಕ್ರಮದ ಸಂದರ್ಭದಲ್ಲಿ, ರೋಜ್‌ಗಾರ್ ಮೇಳ ಉಪಕ್ರಮದಡಿಯಲ್ಲಿ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ೬೧ ಸಾವಿರಕ್ಕೂ ಹೆಚ್ಚು ಹೊಸದಾಗಿ ನೇಮಕಗೊಂಡ ಯುವಕರಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು.  ೧೮ನೇ ರೋಜ್‌ಗಾರ್ ಮೇಳವನ್ನು ದೇಶಾದ್ಯಂತ ೪೫ ಸ್ಥಳಗಳಲ್ಲಿ ಆಯೋಜಿಸಲಾಗಿತ್ತು. ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳು ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರಲಿದ್ದಾರೆ. ಬೆಂಗಳೂರಿನಲ್ಲಿ ನಡೆದ ಉದ್ಯೋಗ ಮೇಳದಲ್ಲಿ, ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ರಾಜ್ಯಖಾತೆ ಸಚಿವೆ ಶೋಭಾ ಕರಂದ್ಲಾಜೆ, ಕೇಂದ್ರ ಸಶಸ್ತ್ರ ಪೊಲೀಸ್ ಪಡೆ ಸೇರಿದಂತೆ ಇನ್ನಿತರ ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

<>><><*><><<>

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<>><><*><><<>

ಜಗತ್ತು ಅನಿಶ್ಚಿತತೆಯ ಅವಧಿಯನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಯುವಕರು ದೈಹಿಕವಾಗಿ, ಮಾನಸಿಕವಾಗಿ, ಭಾವನಾತ್ಮಕವಾಗಿ ಸದೃಢರಾಗಿರಬೇಕು ಮತ್ತು ಪ್ರತಿಯೊಂದು ಸವಾಲನ್ನು ಸ್ವೀಕರಿಸಲು ಸಿದ್ಧರಾಗಿರಬೇಕು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ದೆಹಲಿ ಕ್ಯಾಂಟ್‌ನಲ್ಲಿರುವ ಎನ್‌ಸಿಸಿ ಗಣರಾಜ್ಯೋತ್ಸವ ಶಿಬಿರದಲ್ಲಿ ಇಂದು ಕೆಡೆಟ್‌ಗಳನ್ನುದ್ದೇಶಿಸಿ ಮಾತನಾಡಿದ ಸಚಿವರು, 'ಆಪರೇಷನ್ ಸಿಂಧೂರ್' ಸಮಯದಲ್ಲಿ ದೇಶಾದ್ಯಂತ ಅಣಕು ಕವಾಯತುಗಳ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ಧೈರ್ಯಶಾಲಿ ಎನ್‌ಸಿಸಿ ಕೆಡೆಟ್‌ಗಳಿಂದ ಯುವಕರು ಸ್ಫೂರ್ತಿ ಪಡೆಯುವಂತೆ ಪ್ರೋತ್ಸಾಹಿಸಿದರು.

ಧ್ವನಿ: ರಾಜನಾಥ್ ಸಿಂಗ್ ( ೨೩ ಸೆಕೆಂಡ್ಸ್)

ಕಾರ್ಯಕ್ರಮದ ಭಾಗವಾಗಿ, 'ಹೂಡಿಕೆ ಸಮಾರಂಭ' ನಡೆಯಿತು, ಇದರಲ್ಲಿ ಕೆಡೆಟ್‌ಗಳಿಗೆ ಅವರ ಅತ್ಯುತ್ತಮ ಪ್ರದರ್ಶನ ಮತ್ತು ಕರ್ತವ್ಯ ಸಮರ್ಪಣೆಗಾಗಿ ಸಚಿವ ರಾಜನಾಥ್ ಸಿಂಗ್ ಅವರಿಂದ ರಕ್ಷಾ ಮಂತ್ರಿ ಪದಕ ಮತ್ತು ಪ್ರಶಂಸಾ ಪತ್ರಗಳನ್ನು ನೀಡಲಾಯಿತು.

<>><><*><><<>

ವಡೋದರಾದಲ್ಲಿಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<>><><*><><<>

ನಾಳೆ ದೇಶಾದ್ಯಂತ ಮತದಾರರ ದಿನವನ್ನು ಆಚರಿಸಲಾಗುತ್ತಿದೆ. ಚುನಾವಣಾ ಆಯೋಗ ಸೇರಿದಂತೆ ವಿವಿಧ ಸಚಿವಾಲಯಗಳು ಹಲವು ರೀತಿಯ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿವೆ. ಈ ಸಂಬಂಧ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದಡಿ 'ಮೇರಾ ಯುವ ಭಾರತ್' ಸಂಸ್ಥೆಯು ನಾಳೆ ಬೆಂಗಳೂರಿನಲ್ಲಿ ಮತದಾರರಿಗೆ ಮತದಾನದ ಜಾಗೃತಿ ಮೂಡಿಸಲು ಸೈಕಲ್ ರ್‍ಯಾಲಿ ಮತ್ತು ಪಾದಯಾತ್ರೆಯನ್ನು ಆಯೋಜಿಸಿದೆ. "ನನ್ನ ಭಾರತ ನನ್ನ ಮತ" ಎಂಬ ಘೋಷವಾಕ್ಯದಡಿ ನಡೆಯಲಿರುವ ಈ ಕಾರ್ಯಕ್ರಮವು ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಯುವಜನರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ಕಾರ್ಯಕ್ರಮವು ನಾಳೆ ಬೆಳಿಗ್ಗೆ ೮ ಗಂಟೆಗೆ ಶಾಂತಿನಗರದ ಹಾಕಿ ಕ್ರೀಡಾಂಗಣದಿಂದ ಸೈಕಲ್ ರ್‍ಯಾಲಿಯೊಂದಿಗೆ ಆರಂಭವಾಗಲಿದೆ. ನಂತರ ಮಧ್ಯಾಹ್ನ ೧೨.೩೦ಕ್ಕೆ ಜೆ.ಸಿ. ರಸ್ತೆಯ ಟೌನ್ ಹಾಲ್‌ನಿಂದ ಪಾದಯಾತ್ರೆ ನಡೆಯಲಿದೆ.

<>><><*><><<>

ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಮತ್ತು ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ನವದೆಹಲಿಯಲ್ಲಿಂದು 'ವೀರ್ ಗಾಥಾ ೪.೦' ಪ್ರಶಸ್ತಿ ಪಡೆದ ೧೦೦ ಪುರಸ್ಕೃತರನ್ನು ಸನ್ಮಾನಿಸಿದರು. ಈ ವಿಜೇತರನ್ನು ರಾಷ್ಟ್ರೀಯ ಮಟ್ಟದಲ್ಲಿ ೧೮ ದೇಶಗಳಲ್ಲಿನ ೯೧ ಶಾಲೆಗಳಿಂದ ಮೂರು ವಿಭಾಗಗಳ ಅಡಿಯಲ್ಲಿ ಆಯ್ಕೆ ಮಾಡಲಾಗಿದೆ.

ಪ್ರತಿಯೊಬ್ಬ ವಿಜೇತರಿಗೆ ಹತ್ತು ಸಾವಿರ ರೂಪಾಯಿ ನಗದು ಬಹುಮಾನ ಮತ್ತು ಕರ್ತವ್ಯ ಪಥದಲ್ಲಿ ೨೦೨೬ ರ ಗಣರಾಜ್ಯೋತ್ಸವ ಮೆರವಣಿಗೆಯನ್ನು ವಿಶೇಷ ಅತಿಥಿಗಳಾಗಿ ವೀಕ್ಷಿಸುವ ಅವಕಾಶವನ್ನು ನೀಡಲಾಗಿದೆ. ಈ ವರ್ಷ, ಸುಮಾರು ೧ ಲಕ್ಷ ೯೨ ಸಾವಿರ ಶಾಲೆಗಳಿಂದ ಸುಮಾರು ೧ ಕೋಟಿ ೯೨ ಲಕ್ಷ ವಿದ್ಯಾರ್ಥಿಗಳು ಈ ಯೋಜನೆಯಲ್ಲಿ ಭಾಗವಹಿಸಿದ್ದರು, ಇದು ೨೦೨೧ ರಲ್ಲಿ ಪ್ರಾರಂಭವಾದಾಗಿನಿಂದ ಇದುವರೆಗಿನ ಅತ್ಯಧಿಕ ಭಾಗವಹಿಸುವಿಕೆಯನ್ನು ಗುರುತಿಸುತ್ತದೆ. ವೀರ್ ಗಾಥಾ ೪.೦ ಪ್ರಶಸ್ತಿಯು ರಕ್ಷಣಾ ಮತ್ತು ಶಿಕ್ಷಣ ಸಚಿವಾಲಯಗಳ ಜಂಟಿ ಉಪಕ್ರಮವಾಗಿದೆ.

<>><><*><><<>

ಭಗವಾನ್ ಬುದ್ಧನ ಬೋಧನೆಗಳು ಜಗತ್ತಿನಾದ್ಯಂತ ಸಾಮರಸ್ಯ ಮತ್ತು ಸಹಬಾಳ್ವೆಯ ಮಾರ್ಗವನ್ನು ಬೆಳಗಿಸುತ್ತಿವೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ೨ನೇ ಜಾಗತಿಕ ಬೌದ್ಧ ಶೃಂಗಸಭೆ ೨೦೨೬ ರಲ್ಲಿ ಭಾಗವಹಿಸಿ ಮಾತನಾಡಿದ ಸಚಿವರು, ಶಕ್ತಿಶಾಲಿಯಾಗಿ ಹೊರಹೊಮ್ಮಲು ಬಯಸುವ ದೇಶವು ಬುದ್ಧನ ಮಾರ್ಗ ಮತ್ತು ತತ್ವಗಳನ್ನು ಅನುಸರಿಸಬೇಕು. ಒಟ್ಟಾಗಿ ಬೆಳೆಯುವ ಪರಿಕಲ್ಪನೆಯನ್ನು ಮತ್ತಷ್ಟು ಹೆಚ್ಚಿಸಿಕೊಳ್ಳಲು ಅವರ ತತ್ವಗಳನ್ನು ಅನುಸರಿಸಬೇಕೆಂದು ಕರೆ ನೀಡಿದರು.

<>><><*><><<>

ಭಾರತೀಯ ಕರಾವಳಿ ಕಾವಲು ಪಡೆಯ-ಐಸಿಜಿ, ಆಫ್‌ಶೋರ್ ಗಸ್ತು ನೌಕೆ-ಐಸಿಜಿಎಸ್ ವರಾಹ ಮತ್ತು ತ್ವರಿತ ಗಸ್ತು ನೌಕೆ-ಐಸಿಜಿಎಸ್ ಅತುಲ್ಯ ಇಂದು ಶ್ರೀಲಂಕಾದ ಕೊಲಂಬೊದಲ್ಲಿ ಬಂದರು ಭೇಟಿ ನೀಡಿವೆ. ತಮ್ಮ ವಾಸ್ತವ್ಯದ ಸಮಯದಲ್ಲಿ ಐಸಿಜಿ ಹಡಗುಗಳು, ಶ್ರೀಲಂಕಾ ಕರಾವಳಿ ಕಾವಲುಪಡೆಯೊಂದಿಗೆ ವೃತ್ತಿಪರ ಸಂವಹನದಲ್ಲಿ ತೊಡಗಿಸಿಕೊಳ್ಳಲಿದ್ದು, ಸಾಮರ್ಥ್ಯ ವೃದ್ಧಿ ಮತ್ತು ಉತ್ತಮ ಅಭ್ಯಾಸಗಳ ವಿನಿಮಯದ ಮೇಲೆ ಕೇಂದ್ರೀಕರಿಸುತ್ತವೆ. ಈ ಭೇಟಿಯು ಸೌಹಾರ್ದ, ಸ್ನೇಹಪರ ಕ್ರೀಡಾ ಮತ್ತು ಸಾಂಸ್ಕೃತಿಕ ವಿನಿಮಯಗಳನ್ನು ಸಹ ಒಳಗೊಂಡಿರುತ್ತದೆ.

<>><><*><><<>

ಯುರೋಪಿಯನ್ ಕಮಿಷನ್ ಅಧ್ಯಕ್ಷರಾದ ಉರ್ಸುಲಾ ವಾನ್ ಡೆರ್ ಲೇಯೆನ್ ಅವರು ಭಾರತ ಭೇಟಿಗಾಗಿ ಇಂದು ಮಧ್ಯಾಹ್ನ ನವದೆಹಲಿಗೆ ಆಗಮಿಸಿದರು. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಉರ್ಸುಲಾ ವಾನ್ ಡೆರ್ ಲೇಯೆನ್ ಅವರ ಭೇಟಿಯು, ಭಾರತ ಮತ್ತು ಯುರೋಪಿಯನ್ ಒಕ್ಕೂಟದ ಕಾರ್ಯತಂತ್ರದ ಪಾಲುದಾರಿಕೆಯ ಮುಂದಿನ ಹಂತವನ್ನು ಅನ್ವೇಷಿಸುತ್ತದೆ ಎಂದು ತಿಳಿಸಿದ್ದಾರೆ.

<>><><*><><<>

ಹಿಮಾಚಲ ಪ್ರದೇಶದಲ್ಲಿ ಭಾರೀ ಹಿಮಪಾತದಿಂದ ಸಾಮಾನ್ಯ ಜನ ಜೀವನದ ಮೇಲೆ ತೀವ್ರ ಪರಿಣಾಮ ಬೀರಿದ್ದು, ಸಂಚಾರ ಅಸ್ತವ್ಯಸ್ತವಾಗಿದೆ ಮತ್ತು ಕುಡಿಯುವ ನೀರಿನ ಕೊರತೆಯುಂಟಾಗಿದೆ.

ಶಿಮ್ಲಾ, ಕುಲ್ಲು, ಚಂಬಾ ಮತ್ತು ಕಿನ್ನೌರ್ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಪರಿಸ್ಥಿತಿ ಹದಗೆಟ್ಟಿದೆ. ರಸ್ತೆ ಸಂಚಾರ ಸ್ಥಗಿತಗೊಂಡಿದ್ದು, ವಿದ್ಯುತ್ ಮತ್ತು ನೀರು ಸರಬರಾಜು ಅಸ್ತವ್ಯಸ್ತವಾಗಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>